# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಎಚ್.ರಸ್ತೆ, ತುಮಕೂರು - 572 103


ಸಂಖ್ಯೆ: ತುವಿ:ಶೈವಿ:2021-22: 474 ದಿನಾಂಕ: 18.05.2022

## ಸುತ್ತೋಲೆ

ವಿಷಯ : ಕರ್ನಾಟಕ ರಾಜ್ಯದ ಉನ್ನತ ಶಿಕ್ಷಣ ಒಟ್ಟು ದಾಖಲಾತಿ ಅನುಪಾತವನ್ನು ಹೆಚ್ಚಿಸುವ ಅಧ್ಯಯನದಲ್ಲಿ ಕೆ.ಪಿ.ಎಂ.ಜಿ. ಇಂಡಿಯಾ ಸಂಸ್ಥೆಯೊಂದಿಗೆ ಸಹಕರಿಸಲು ಕೋರಿ.

ಉಲ್ಲೇಖ: 1. ಪತ್ರ ಸಂಖ್ಯೆ: KSHEC/KPMG/GER/2022-23/344 ದಿನಾಂಕ: 07.05.2022
2. ಮಾನ್ಯ ಕುಲಪತಿಗಳ ಅನುಮೋದನೆ ಕಂಡಿಕೆ(153)ದಿನಾಂಕ:18.05.2022.

* * *

ಮೇಲ್ಕಂಡ ವಿಷಯ ಹಾಗೂ ಉಲ್ಲೇಖ(1)ಕ್ಕೆ ಸಂಬಂಧಿಸಿದಂತೆ, ಕೆ.ಪಿ.ಎಂ.ಜಿ., ಇಂಡಿಯಾ ಸಂಸ್ಥೆಯು ಕರ್ನಾಟಕದಲ್ಲಿ ಉನ್ನತ ಶಿಕ್ಷಣ ವ್ಯವಸ್ಥೆಯ ಕುರಿತು ಅಧ್ಯಯನ ನಡೆಸಿ ದಾಖಲಾತಿ ಅನುಪಾತವನ್ನು ಸುಧಾರಿಸುವ ಕುರಿತು, ಉನ್ನತ ಶಿಕ್ಷಣದ ಮಧ್ಯದಲ್ಲಿ ಶಿಕ್ಷಣವನ್ನು ಮೊಟಕುಗೊಳಿಸುವುದನ್ನು ತಪ್ಪಿಸಲು ಹೊಸ ಮಾರ್ಗಗಳನ್ನು ಸೃಷ್ಟಿಸುವುದು, ಸಾಮರ್ಥ್ಯದ ವಿಸ್ತರಣೆ ಮುಕ್ತ ದೂರ ಮತ್ತು ಆನ್‌ಲೈನ್ ಕಲಿಕೆಯ ಬಲವರ್ಧನೆ, ವಿದ್ಯಾರ್ಥಿ ವೇತನ, ಸಹಾಯಧನ, ಖಾಸಗಿ ವಲಯದಲ್ಲಿ ಭಾಗವಹಿಸುವಿಕೆ ಇತ್ಯಾದಿಗಳ ಕುರಿತು ವರದಿ ಸಲ್ಲಿಸಬೇಕಾಗಿದೆ. ಈ ಕುರಿತು ಅಧ್ಯಯನಕ್ಕೆ ಸಂಬಂಧಿಸಿದಂತೆ, ಕೆ.ಪಿ.ಎಂ.ಜಿ. ಇಂಡಿಯಾ ಸಂಸ್ಥೆಯ ತಂಡವು ವಿಶ್ವವಿದ್ಯಾನಿಲಯಗಳಿಗೆ ಹಾಗೂ ಸಂಯೋಜಿತ ಕಾಲೇಜುಗಳಿಗೆ ದಿನಾಂಕ:10.05.2022ರ ಮೇಲ್ಪಟ್ಟು ಭೇಟಿ ನೀಡಲಿದ್ದು, ಭೇಟಿಯ ಸಂದರ್ಭದಲ್ಲಿ ಸಂಸ್ಥೆಯ ಪ್ರತಿನಿಧಿಗಳಿಗೆ ಸ್ಪಂದಿಸಿ, ಅಗತ್ಯ ಮಾಹಿತಿ ನೀಡಿ ಸಹಕರಿಸುವಂತೆ, ವಿಶ್ವವಿದ್ಯಾನಿಲಯ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು ಹಾಗೂ ಸ್ನಾತಕೋತ್ತರ ಕೇಂದ್ರಗಳಿಗೆ ಈ ಮೂಲಕ ತಿಳಿಸಲಾಗಿದೆ.

ಕರಡು ಪತ್ರವು ಮಾನ್ಯಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಆದೇಶದ ಮೇರೆಗೆ
Mangalahomi M
ಉಪಕುಲಸಚಿವರು
ಶೈಕ್ಷಣಿಕ ವಿಭಾಗ
ತುಮಕೂರು ವಿಶ್ವವಿದ್ಯಾಲಯ

ಗೆ,

1. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯದ ಘಟಕ ಮತ್ತು ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮುಖ್ಯಸ್ಥರು, ಸ್ನಾತಕೋತ್ತರ ಅಧ್ಯಯನ ಮತ್ತು ಸಂಶೋಧನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮುಖ್ಯಸ್ಥರು/ಸಂಯೋಜಕರು, ಸ್ನಾತಕೋತ್ತರ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.

ಪ್ರತಿಗಳು:

1. Executive Director, Karnataka State Higher Education Council, No. 30, Prasanna Kumar Block, Y Ramachandra Road, Gandhinagar, Bangalore-560009
2. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಚೇರಿ ಪ್ರತಿ.